. fdRNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**



| ಭಾಗ– IV-A<br>Part– IV-A | ಬೆಂಗಳೂರು, ಗುರುವಾರ, ಏಪ್ರಿಲ್ ೩೦, ೨೦೧೫ (ವೈಶಾಖ ೧೦, ಶಕ ವರ್ಷ ೧೯೩೭)<br>Bengaluru, Thursday, April 30, 2015 (Vaishakha 10, Shaka Varsha 1937) | ನಂ. ೩೮೨<br>No. 382 |
|---|---|---|



ಸಂಸದೀಯ ವ್ಯವಹಾರಗಳ ಸಚಿವಾಲಯ

**ಅಧಿಸೂಚನೆ**

**ಸಂಖ್ಯೆ: ಸಂವ್ಯಶಾಇ 26 ಶಾಸನ 2015, ಬೆಂಗಳೂರು, ದಿನಾಂಕ:30.04.2015.**

ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕ, 2015ಕ್ಕೆ 2015ರ ಏಪ್ರಿಲ್ ತಿಂಗಳ ಇಪ್ಪತ್ತೊಂಬತನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2015ರ ಕರ್ನಾಟಕ ಅಧಿನಿಯಮ ಸಂಖ್ಯೆ:17 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2015ರ ಕರ್ನಾಟಕ ಅಧಿನಿಯಮ ಸಂಖ್ಯೆ: 17**

(2015ರ ಏಪ್ರಿಲ್ ತಿಂಗಳ ಮೂವತ್ತನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2015**

(2015ರ ಏಪ್ರಿಲ್ ತಿಂಗಳ ಇಪ್ಪತ್ತೊಂಬತ್ತನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ನ್ನು (1993ರ ಕರ್ನಾಟಕ ಅಧಿನಿಯಮ 14) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.**- (1) ಈ ಅಧಿನಿಯಮವನ್ನು ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2015 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 5ನೇ ಪ್ರಕರಣದ ತಿದ್ದುಪಡಿ.**- ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರಲ್ಲಿ (1993ರ ಕರ್ನಾಟಕ ಅಧಿನಿಯಮ 14) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 5ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿ,-

(ಎ) "ಮಹಿಳೆಯರಿಗಾಗಿ" ಎಂಬ ಪದಗಳ ತರುವಾಯ, "ಒಟ್ಟಾರೆಯಾಗಿ ಅರ್ಧದಷ್ಟು ಪರಿಮಿತಿಗೆ ಒಳಪಟ್ಟು ಮುಂದಿನ ಸಂಖ್ಯೆಗೆ ಪೂರ್ಣಾಂಕಗೊಳಿಸಿದಷ್ಟು" ಎಂಬ ಪದಗಳನ್ನು ಸೇರಿಸತಕ್ಕದ್ದು;

(ಬಿ) ಎರಡನೇ ಪರಂತುಕದಲ್ಲಿ, "ಹಂಚಿಕೆ ಮಾಡತಕ್ಕದ್ದು" ಎಂಬ ಪದಗಳ ತರುವಾಯ "ಅಂಥ ಸರದಿಯು ಹತ್ತು ವರ್ಷಗಳ ಅವಧಿಯವರೆಗೆ ಮುಂದುವರೆಯತಕ್ಕದ್ದು" ಎಂಬ ಪದಗಳನ್ನು ಸೇರಿಸತಕ್ಕದ್ದು.

**3. 9ನೇ ಪ್ರಕರಣದ ತಿದ್ದುಪಡಿ.**- ಮೂಲ ಅಧಿನಿಯಮದ 9ನೇ ಪ್ರಕರಣದಲ್ಲಿ, (2)ನೇ ಉಪಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(3) ಪಂಚಾಯತಿಯ ಚುನಾವಣೆಯಲ್ಲಿ ಮತನೀಡುವುದು ಗ್ರಾಮ ಪಂಚಾಯತಿಯ ಮತದಾರರ ಪಟ್ಟಿಯಲ್ಲಿ ತನ್ನ ಹೆಸರು ಇರುವ ಪ್ರತಿಯೊಬ್ಬ ವ್ಯಕ್ತಿಯ ಕರ್ತವ್ಯವಾಗಿರತಕ್ಕದ್ದು ಮತ್ತು ಅದು ಕಡ್ಡಾಯವಾಗಿರತಕ್ಕದ್ದು. ಆದಾಗ್ಯೂ, (4)ನೇ ಉಪಪ್ರಕರಣದಲ್ಲಿ ಸೂಚಿಸಿದಂತೆ ಆತನು ತನ್ನ ಮತವನ್ನು ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳ ಪರವಾಗಿ ನೀಡದೆಯೇ ಚಲಾಯಿಸಲು ಸ್ವತಂತ್ರನಾಗಿರತಕ್ಕದ್ದು.

(4) ಚುನಾವಣಾ ಆಯುಕ್ತರು ಸೂಕ್ತ ಉಪಬಂಧವನ್ನು ಕಲ್ಪಿಸಿದರೆ, ಆತನು ಯಾವುದೇ ಅಭ್ಯರ್ಥಿಯ ಪರವಾಗಿ ಮತ ನೀಡಲು ಬಯಸದಿದ್ದ ಪಕ್ಷದಲ್ಲಿ, ಅರ್ಹ ಮತದಾರನು ತನ್ನ ಮತವನ್ನು ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳ ಪರವಾಗಿ ನೀಡದೆಯೇ ಚಲಾಯಿಸತಕ್ಕದ್ದು."

**4. 44ನೇ ಪ್ರಕರಣದ ತಿದ್ದುಪಡಿ.–** ಮೂಲ ಅಧಿನಿಯಮದ 44ನೇ ಪ್ರಕರಣದ (2)ನೇ ಉಪಪ್ರಕರಣದ (ಸಿ) ಖಂಡದಲ್ಲಿ, "ಮಹಿಳೆಯರಿಗಾಗಿ" ಎಂಬ ಪದಗಳ ತರುವಾಯ, "ಒಟ್ಟಾರೆಯಾಗಿ ಒಟ್ಟು ಸಂಖ್ಯೆಯ ಅರ್ಧದಷ್ಟು ಪರಿಮಿತಿಗೆ ಒಳಪಟ್ಟು ಮುಂದಿನ ಸಂಖ್ಯೆಗೆ ಪೂರ್ಣಾಂಕಗೊಳಿಸಿದಷ್ಟು" ಎಂಬ ಪದಗಳನ್ನು ಸೇರಿಸತಕ್ಕದ್ದು.

**5. 46ನೇ ಪ್ರಕರಣದ ತಿದ್ದುಪಡಿ.–** ಮೂಲ ಅಧಿನಿಯಮದ 46ನೇ ಪ್ರಕರಣ (1)ನೇ ಉಪಪ್ರಕರಣದಲ್ಲಿ, "ಮೂವತ್ತು ತಿಂಗಳುಗಳು" ಎಂಬ ಪದಗಳಿಗೆ "ಐದು ವರ್ಷಗಳು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**6. 123ನೇ ಪ್ರಕರಣದ ತಿದ್ದುಪಡಿ.–** ಮೂಲ ಅಧಿನಿಯಮದ 123ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ,–

(ಎ) "ಮಹಿಳೆಯರಿಗಾಗಿ" ಎಂಬ ಪದಗಳ ತರುವಾಯ, "ಒಟ್ಟಾರೆಯಾಗಿ ಅರ್ಧದಷ್ಟು ಪರಿಮಿತಿಗೆ ಒಳಪಟ್ಟು ಮುಂದಿನ ಸಂಖ್ಯೆಗೆ ಪೂರ್ಣಾಂಕಗೊಳಿಸಿದಷ್ಟು" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) ಮೊದಲನೇ ಪರಂತುಕದಲ್ಲಿ, "ಪ್ರಕಾರ ಹಂಚತಕ್ಕದ್ದು" ಎಂಬ ಪದಗಳ ತರುವಾಯ, "ಅಂಥ ಸರದಿಯು ಹತ್ತು ವರ್ಷಗಳ ಅವಧಿಯವರೆಗೆ ಮುಂದುವರೆಯತಕ್ಕದ್ದು" ಎಂಬ ಪದಗಳನ್ನು ಸೇರಿಸತಕ್ಕದ್ದು.

**7. 125ನೇ ಪ್ರಕರಣದ ತಿದ್ದುಪಡಿ.–** ಮೂಲ ಅಧಿನಿಯಮದ 125ನೇ ಪ್ರಕರಣದ (2)ನೇ ಉಪಪ್ರಕರಣದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:–

"(3) ಪಂಚಾಯತಿಯ ಚುನಾವಣೆಯಲ್ಲಿ ಮತನೀಡುವುದು ತಾಲ್ಲೂಕು ಪಂಚಾಯತಿಯ ಮತದಾರರ ಪಟ್ಟಿಯಲ್ಲಿ ತನ್ನ ಹೆಸರು ಇರುವ ಪ್ರತಿಯೊಬ್ಬ ವ್ಯಕ್ತಿಯ ಕರ್ತವ್ಯವಾಗಿರತಕ್ಕದ್ದು ಮತ್ತು ಅದು ಕಡ್ಡಾಯವಾಗಿರತಕ್ಕದ್ದು. ಆದಾಗ್ಯೂ, (4)ನೇ ಉಪಪ್ರಕರಣದಲ್ಲಿ ಸೂಚಿಸಿದಂತೆ ಆತನು ತನ್ನ ಮತವನ್ನು ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳ ಪರವಾಗಿ ನೀಡದೆಯೇ ಚಲಾಯಿಸಲು ಸ್ವತಂತ್ರನಾಗಿರತಕ್ಕದ್ದು.

(4) ಚುನಾವಣಾ ಆಯುಕ್ತರು ಸೂಕ್ತ ಉಪಬಂಧವನ್ನು ಕಲ್ಪಿಸಿದರೆ, ಆತನು ಯಾವುದೇ ಅಭ್ಯರ್ಥಿಯ ಪರವಾಗಿ ಮತ ನೀಡಲು ಬಯಸದಿದ್ದ ಪಕ್ಷದಲ್ಲಿ, ಅರ್ಹ ಮತದಾರನು ತನ್ನ ಮತವನ್ನು ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳ ಪರವಾಗಿ ನೀಡದೆಯೇ ಚಲಾಯಿಸತಕ್ಕದ್ದು."

**8. 138ನೇ ಪ್ರಕರಣದ ತಿದ್ದುಪಡಿ.–** ಮೂಲ ಅಧಿನಿಯಮದ 138ನೇ ಪ್ರಕರಣದಲ್ಲಿ,–

(ಎ) (2)ನೇ ಉಪಪ್ರಕರಣದ (ಸಿ) ಖಂಡದಲ್ಲಿ, "ಮಹಿಳೆಯರಿಗಾಗಿ" ಎಂಬ ಪದಗಳ ತರುವಾಯ, "ಒಟ್ಟಾರೆಯಾಗಿ ಒಟ್ಟು ಸಂಖ್ಯೆಯ ಅರ್ಧದಷ್ಟು ಪರಿಮಿತಿಗೆ ಒಳಪಟ್ಟು ಮುಂದಿನ ಸಂಖ್ಯೆಗೆ ಪೂರ್ಣಾಂಕಗೊಳಿಸಿದಷ್ಟು" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) ಪರಂತುಕವನ್ನು ಹೊರತುಪಡಿಸಿ, (3)ನೇ ಉಪಪ್ರಕರಣಕ್ಕೆ, ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:–

"(3) ಈ ಅಧಿನಿಯಮದಲ್ಲಿ ಅನ್ಯಥಾ ಉಪಬಂಧಿಸಿದುದನ್ನು ಹೊರತುಪಡಿಸಿ, ತಾಲ್ಲೂಕು ಪಂಚಾಯತಿಯ ಪ್ರತಿಯೊಬ್ಬ ಅಧ್ಯಕ್ಷ ಮತ್ತು ಪ್ರತಿಯೊಬ್ಬ ಉಪಾಧ್ಯಕ್ಷನ ಹುದ್ದೆಯ ಅವಧಿಯು, ಆತನನ್ನು ಚುನಾಯಿಸಿದ ದಿನಾಂಕದಿಂದ ಐದು ವರ್ಷಗಳು ಅಥವಾ ಅವನು ತಾಲ್ಲೂಕು ಪಂಚಾಯತಿಯ ಸದಸ್ಯನಾಗಿರುವುದು ನಿಂತುಹೋಗುವವರಗೆ, ಇದರಲ್ಲಿ ಯಾವುದು ಮೊದಲೋ ಆ ಅವಧಿಯಾಗಿರತಕ್ಕದ್ದು."

**9. 162ನೇ ಪ್ರಕರಣದ ತಿದ್ದುಪಡಿ.–** ಮೂಲ ಅಧಿನಿಯಮದ 162ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ,–

(ಎ) "ಮಹಿಳೆಯರಿಗಾಗಿ" ಎಂಬ ಪದಗಳ ತರುವಾಯ, "ಒಟ್ಟಾರೆಯಾಗಿ ಅರ್ಧದಷ್ಟು ಪರಿಮಿತಿಗೆ ಒಳಪಟ್ಟು ಮುಂದಿನ ಸಂಖ್ಯೆಗೆ ಪೂರ್ಣಾಂಕಗೊಳಿಸಿದಷ್ಟು" ಎಂಬ ಪದಗಳನ್ನು ಸೇರಿಸತಕ್ಕದ್ದು;

(ಬಿ) ಪರಂತುಕದಲ್ಲಿ, "ಹಂಚಿಕೆಯನ್ನು ಮಾಡತಕ್ಕದ್ದು" ಎಂಬ ಪದಗಳ ತರುವಾಯ "ಅಂಥ ಸರದಿಯು ಹತ್ತು ವರ್ಷಗಳ ಅವಧಿಯವರೆಗೆ ಮುಂದುವರೆಯತಕ್ಕದ್ದು" ಎಂಬ ಪದಗಳನ್ನು ಸೇರಿಸತಕ್ಕದ್ದು.

**10. 164ನೇ ಪ್ರಕರಣದ ತಿದ್ದುಪಡಿ.–** ಮೂಲ ಅಧಿನಿಯಮದ 164ನೇ ಪ್ರಕರಣದ (2)ನೇ ಉಪಪ್ರಕರಣದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:–

"(3) ಪಂಚಾಯತಿಯ ಚುನಾವಣೆಯಲ್ಲಿ ಮತನೀಡುವುದು ಜಿಲ್ಲಾ ಪಂಚಾಯತಿಯ ಮತದಾರರ ಪಟ್ಟಿಯಲ್ಲಿ ತನ್ನ ಹೆಸರು ಇರುವ ಪ್ರತಿಯೊಬ್ಬ ವ್ಯಕ್ತಿಯ ಕರ್ತವ್ಯವಾಗಿರತಕ್ಕದ್ದು ಮತ್ತು ಅದು ಕಡ್ಡಾಯವಾಗಿರತಕ್ಕದ್ದು. ಆದಾಗ್ಯೂ, (4)ನೇ ಉಪಪ್ರಕರಣದಲ್ಲಿ ಸೂಚಿಸಿದಂತೆ ಆತನು ತನ್ನ ಮತವನ್ನು ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳ ಪರವಾಗಿ ನೀಡದೆಯೇ ಚಲಾಯಿಸಲು ಸ್ವತಂತ್ರನಾಗಿರತಕ್ಕದ್ದು.

(4) ಚುನಾವಣಾ ಆಯುಕ್ತರು ಸೂಕ್ತ ಉಪಬಂಧವನ್ನು ಕಲ್ಪಿಸಿದರೆ, ಆತನು ಯಾವುದೇ ಅಭ್ಯರ್ಥಿಯ ಪರವಾಗಿ ಮತ ನೀಡಲು ಬಯಸದಿದ್ದ ಪಕ್ಷದಲ್ಲಿ, ಅರ್ಹ ಮತದಾರನು ತನ್ನ ಮತವನ್ನು ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳ ಪರವಾಗಿ ನೀಡದೆಯೇ ಚಲಾಯಿಸತಕ್ಕದ್ದು."

**11. 177ನೇ ಪ್ರಕರಣದ ತಿದ್ದುಪಡಿ.**- ಮೂಲ ಅಧಿನಿಯಮದ 177ನೇ ಪ್ರಕರಣದಲ್ಲಿ,-

(ಎ) (2)ನೇ ಉಪಪ್ರಕರಣದ, (ಸಿ) ಖಂಡದಲ್ಲಿ "ಮಹಿಳೆಯರಿಗಾಗಿ" ಎಂಬ ಪದಗಳ ತರುವಾಯ, "ಒಟ್ಟಾರೆಯಾಗಿ ಅರ್ಧದಷ್ಟು ಪರಿಮಿತಿಗೆ ಒಳಪಟ್ಟು ಮುಂದಿನ ಸಂಖ್ಯೆಗೆ ಪೂರ್ಣಾಂಕಗೊಳಿಸಿದಷ್ಟು" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) ಪರಂತುಕವನ್ನು ಹೊರತುಪಡಿಸಿ, (3)ನೇ ಉಪಪ್ರಕರಣಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(3) ಈ ಅಧಿನಿಯಮದಲ್ಲಿ ಅನ್ಯಥಾ ಉಪಬಂಧಿಸಿದುದನ್ನು ಹೊರತುಪಡಿಸಿ, ಜಿಲ್ಲಾ ಪಂಚಾಯತಿಯ ಪ್ರತಿಯೊಬ್ಬ ಅಧ್ಯಕ್ಷ ಮತ್ತು ಪ್ರತಿಯೊಬ್ಬ ಉಪಾಧ್ಯಕ್ಷನ ಹುದ್ದೆಯ ಅವಧಿಯು, ಆತನನ್ನು ಚುನಾಯಿಸಿದ ದಿನಾಂಕದಿಂದ ಐದು ವರ್ಷಗಳು ಅಥವಾ ಅವನು ಜಿಲ್ಲಾ ಪಂಚಾಯತಿಯ ಸದಸ್ಯನಾಗಿರುವುದು ನಿಂತುಹೋಗುವವರೆಗೆ, ಇದರಲ್ಲಿ ಯಾವುದು ಮೊದಲೋ ಆ ಅವಧಿಯಾಗಿರತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಭಾ.ಭೀ. ಪತ್ತಾರ**
ಸರ್ಕಾರದ ಕಾರ್ಯದರ್ಶಿ(ಪ್ರ)
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿಇ) (250 ಪ್ರತಿಗಳು)